ಕರ್ನಾಟಕ ಸರ್ಕಾರ

ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, 1ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು-01

E-mail ID: icps.kar@gmail.com Ph.No:080-22879381/82

ಸಂಖ್ಯೆ:ಕೆಎಸ್‌ಐಸಿಪಿಎಸ್/ಸಾಆ/ಪೋರ್ರ-/68/2015-16 ದಿನಾಂಕ: 15.06.2018

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು,
ಎಲ್ಲಾ ಜಿಲ್ಲಾ ಮಕ್ಕಳ ರಕ್ಷಣಾ ಘಟಕ

ಮಾನ್ಯರೆ,

ವಿಷಯ: ಮಕ್ಕಳ ಪಾಲನಾ ಸಂಸ್ಥೆಗಳಲ್ಲಿರುವ ಗಂಡು ಮತ್ತು ಹೆಣ್ಣು ಮಕ್ಕಳಿಗೆ ಪ್ರತ್ಯೇಕ ವಸತಿ ಸೌಕರ್ಯ ವ್ಯವಸ್ಥೆ ಕಲ್ಪಿಸುವ ಬಗ್ಗೆ.

ಉಲ್ಲೇಖ: ಸಂಖ್ಯೆ- CARA /2018/ AC/1 ದಿನಾಂಕ: 04-06-2018

*****

ಮೇಲಿನ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, CARA ಸಲಹಾ ಸಮಿತಿ ಸದಸ್ಯರುಗಳು ದತ್ತು ಕೇಂದ್ರಗಳಿಗೆ ಮತ್ತು ಮಕ್ಕಳ ಪಾಲನಾ ಸಂಸ್ಥೆಗಳಿಗೆ ಭೇಟಿ ನೀಡಿದ ಸಂದರ್ಭಗಳಲ್ಲಿ ಸಂಸ್ಥೆಗಳಲ್ಲಿ ದಾಖಲಾಗಿರುವ ಪ್ರೌಢಾವಸ್ಥೆಯಲ್ಲಿರುವ ಗಂಡು ಮತ್ತು ಹೆಣ್ಣು ಮಕ್ಕಳಿಗೆ ಒಂದೇ ಸ್ಥಳದಲ್ಲಿ ವಸತಿ ಸೌಕರ್ಯದ ವ್ಯವಸ್ಥೆ ಕಲ್ಪಿಸಿರುವುದನ್ನು ಗಮನಿಸಿರುತ್ತಾರೆ. ಈ ಕುರಿತು ಕಳವಳ ವ್ಯಕ್ತ ಪಡಿಸಿದ್ದು ಪ್ರತ್ಯೇಕ ವಸತಿ ಸೌಕರ್ಯ ವ್ಯವಸ್ಥೆ ಕಲ್ಪಿಸುವಂತೆ ಸೂಚಿಸಿರುತ್ತಾರೆ.

ದತ್ತು ನಿಯಮಗಳು 2017 ರ ಅನ್ವಯ 24 (1) (f), 26 (4) (h) ಮತ್ತು ಶೆಡ್ಯೂಲ್ XIII (1) (a) (i) ರ ಪ್ರಕಾರ ಮಕ್ಕಳು ಬಾಲ್ಯದಿಂದ ಪ್ರೌಢಾವಸ್ಥೆಯ ಪರಿವರ್ತನೆಯ ಅವಧಿಯಲ್ಲಿ ಆರೋಗ್ಯಕರವಾಗಿ ಬೆಳವಣಿಗೆ ಹೊಂದಲು ಪ್ರೌಢಾವಸ್ಥೆಯಲ್ಲಿರುವ ಗಂಡು ಮತ್ತು ಹೆಣ್ಣು ಮಕ್ಕಳಿಗಾಗಿ ಪ್ರತ್ಯೇಕವಾದ ಕೊಠಡಿಗಳ ವ್ಯವಸ್ಥೆ ಕಲ್ಪಿಸುವುದು.

ಬಾಲನ್ಯಾಯ ಮಾದರಿ ನಿಯಮಗಳು 2016 ಸೆಕ್ಷನ್ 29 (iv) (a) ಮತ್ತು (b) ಅನ್ವಯ 10 ವರ್ಷಕ್ಕಿಂತ ಕಡಿಮೆ ವಯಸ್ಸಿನ ಗಂಡು ಮತ್ತು ಹೆಣ್ಣು ಮಕ್ಕಳನ್ನು ಒಂದೇ ಸಂಸ್ಥೆಯಲ್ಲಿರಿಸಿದರೂ ಕೂಡ 5- 10 ವರ್ಷದೊಳಗಿನ ಮಕ್ಕಳಿಗೆ ಪ್ರತ್ಯೇಕ ಸ್ನಾನಗೃಹ ಮತ್ತು ಮಲಗುವ ಕೋಣೆಗಳ ವ್ಯವಸ್ಥೆಯನ್ನು ಮಾಡಬೇಕು ಹಾಗೂ 7-11 ವರ್ಷದ ಮತ್ತು 12-18 ವರ್ಷದ ಗಂಡು ಮತ್ತು ಹೆಣ್ಣು ಮಕ್ಕಳಿಗೆ ಪ್ರತ್ಯೇಕ ಬಾಲಮಂದಿರಗಳ ವ್ಯವಸ್ಥೆಯನ್ನು ಕಲ್ಪಿಸುವುದು.

ಈ ನಿಟ್ಟಿನಲ್ಲಿ ಕ್ರಮ ವಹಿಸಬೇಕಾಗಿದ್ದು, ಮಕ್ಕಳು ಆರೋಗ್ಯಕರ ಪರಿಸರದಲ್ಲಿ ಬೆಳವಣಿಗೆ ಹೊಂದಲು ಗಂಡು ಮತ್ತು ಹೆಣ್ಣು ಮಕ್ಕಳಿಗಾಗಿ ಪ್ರತ್ಯೇಕವಾದ ಕೊಠಡಿಗಳ ವ್ಯವಸ್ಥೆ ಕಲ್ಪಿಸುವುದು ಅತ್ಯವಶ್ಯಕವಾಗಿರುವುದರಿಂದ ಈ ಕುರಿತು ಎಲ್ಲಾ ಮಕ್ಕಳ ಪಾಲನಾ ಸಂಸ್ಥೆಗಳನ್ನು ಪರಿಶೀಲಿಸಿ ಕಡ್ಡಾಯವಾಗಿ ಎಲ್ಲಾ ಸಂಸ್ಥೆಗಳಲ್ಲಿ ಪ್ರತ್ಯೇಕ ವಸತಿ ಸೌಕರ್ಯ ನೀಡಿರುವ ಬಗ್ಗೆ ಖಚಿತಪಡಿಸಿಕೊಂಡು ವರದಿ ನೀಡುವುದು.

ತಮ್ಮ ವಿಶ್ವಾಸಿ,

ಸದಸ್ಯ ಕಾರ್ಯದರ್ಶಿ,
ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ
ಸೊಸೈಟಿ, ಬೆಂಗಳೂರು

By mail
21/06/18

ಪ್ರತಿಯನ್ನು:

1) ಜಂಟಿ ನಿರ್ದೇಶಕರು, CARA, A Statutory Body of Ministry of Women & Child Development, Government of India ಇವರಿಗೆ ಮಾಹಿತಿಗಾಗಿ